**All India Radio: Bangalore**
**Regional Bulletin In Kannada**
**07.09.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**07.09.2025 / 2.30 p.m.**

**<><><><>**

ಮುಖ್ಯಾಂಶಗಳು

- ಕಾವೇರಿ ನದಿ ಪಾತ್ರದಲ್ಲಿ ರೆಸಾರ್ಟ್ ಮಾಲೀಕರಿಂದ ಅತಿಕ್ರಮಣ ; ಒತ್ತುವರಿ ತೆರವಿಗೆ ಉಪಲೋಕಾಯುಕ್ತರ ಸೂಚನೆ
- ಬೆಂಗಳೂರಿನ ಈಜೀಪುರದ ಘನತ್ಯಾಜ್ಯ ಘಟಕದಲ್ಲಿ ಪ್ರತಿನಿತ್ಯ ಸುಮಾರು ೧೭೦ ಮೆಟ್ರಿಕ್ ಟನ್ ತ್ಯಾಜ್ಯ ವಿಲೇವಾರಿ
- ರಾಜ್ಯದ ವಿವಿಧೆಡೆ ಇಂದು ಬ್ರಹ್ಮಶ್ರೀ ನಾರಾಯಣ ಗುರುಗಳ ಜಯಂತಿ ಆಚರಣೆ
- ಖಗ್ರಾಸ ಚಂದ್ರಗ್ರಹಣ ಹಿನ್ನೆಲೆಯಲ್ಲಿ ಇಂದು ಸಂಜೆಯಿಂದ ದೇಗುಲಗಳು ಬಂದ್

<><><><>

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕಾವೇರಿ ನದಿ ಪಾತ್ರದಲ್ಲಿ ಯಾವುದೇ ಪರವಾನಗಿ ಪಡೆಯದೆ ಬಫರ್ ವಲಯವನ್ನೇ ಅತಿಕ್ರಮಿಸಿ, ಅಕ್ರಮ ರೆಸಾರ್ಟ್ ನಿರ್ಮಿಸಿಕೊಂಡು, ನದಿ ಪಥವನ್ನೇ ಬದಲಾವಣೆ ಮಾಡಿರುವ ಹಿನ್ನೆಲೆಯಲ್ಲಿ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಸ್ವಹಿತಾಸಕ್ತಿ ಪ್ರಕರಣ ದಾಖಲಿಸಿಕೊಂಡು, ನದಿ ಒತ್ತುವರಿ ತೆರವಿಗೆ ಕ್ರಮ ವಹಿಸುವಂತೆ ಸ್ಥಳೀಯ ತಹಸೀಲ್ದಾರ್‌ಗೆ ಸೂಚನೆ ನೀಡಿದ್ದಾರೆ. ಉಪಲೋಕಾಯುಕ್ತ ವೀರಪ್ಪ ಅವರು ಮಂಡ್ಯಕ್ಕೆ ಸಾರ್ವಜನಿಕ ಅಹವಾಲು ಸ್ವೀಕಾರ ಮಾಡಲು ಬಂದಿದ್ದಾಗ ಶ್ರೀರಂಗಪಟ್ಟಣದ ರಂಗನತಿಟ್ಟು ಪಕ್ಷಿಧಾಮ ಹಾಗೂ ಗೂಳಿತಿಟ್ಟು ಬಳಿ ಅತಿಕ್ರಮಣ ಪ್ರವೇಶ ಮಾಡಿ, ನದಿ ಪಥ ಬದಲು ಮಾಡಿರುವುದು ಬಯಲಿಗೆ ಬಂದಿತ್ತು. ರಂಗನತಿಟ್ಟು ಪಕ್ಷಿ ಧಾಮ ಸಮೀಪವೇ ಕೆಲ ರೆಸಾರ್ಟ್‌ಗಳಲ್ಲಿ ಮನರಂಜನೆಗಾಗಿ ಡಿಜೆ ಹಾಕಿದಾಗ ಪಕ್ಷಿ ಸಂಕುಲಕ್ಕೆ ಸಮಸ್ಯೆಯಾಗುತ್ತದೆ ಎಂದು ಉಪ ಲೋಕಾಯುಕ್ತರು ಆತಂಕ ವ್ಯಕ್ತಪಡಿಸಿದ್ದಾರೆ ಇದರ ಜೊತೆಗೆ ಬಂಗಾರ ದೊಡ್ಡಿ ಅಣೆಕಟ್ಟೆನ ಪಕ್ಕದಲ್ಲೇ ಕಾವೇರಿ ನದಿ ಒತ್ತುವರಿ ಮಾಡಿಕೊಂಡು ರೆಸಾರ್ಟ್, ಹೋಟೆಲ್‌ಗಳನ್ನು

ನಿರ್ಮಿಸಲಾಗಿದೆ. ಈ ಹಿನ್ನೆಲೆಯಲ್ಲಿ ಶ್ರೀರಂಗಪಟ್ಟಣ ತಾಲೂಕು ಆಡಳಿತಕ್ಕೆ ೭೦ ಪುಟಗಳ ಸೂಚನಾ ಪಟ್ಟಿ ನೀಡಿರುವ ಉಪ ಲೋಕಾಯುಕ್ತರು, ಸ್ವಹಿತಾಸಕ್ತಿ ಪ್ರಕರಣ ದಾಖಲಿಸಿ ಎಲ್ಲಾ ಒತ್ತುವರಿಗೆ ತೆರವಿಗೆ ಸೂಚಿಸಿದ್ದಾರೆ.

<><><><>

ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ವ್ಯಾಪ್ತಿಯ ಈಜೀಪುರ ದ್ವಿತೀಯ ಹಂತದ ಘನತ್ಯಾಜ್ಯ ವರ್ಗಾವಣೆ ಘಟಕ ಯಶಸ್ವಿ ಕಾರ್ಯನಿರ್ವಹಣೆ ಮಾಡುತ್ತಿದೆ ಎಂದು ಆಯುಕ್ತ ಕೆ.ಎನ್.ರಮೇಶ್ ತಿಳಿಸಿದ್ದಾರೆ. ಈಜಿಪುರದಲ್ಲಿರುವ ದ್ವಿತೀಯ ಹಂತದ ಘನತ್ಯಾಜ್ಯ ಘಟಕ ಹಾಗೂ ಸ್ವಯಂ ಚಾಲಿತ ತ್ಯಾಜ್ಯ ವಿಂಗಡಣೆ ಘಟಕಕ್ಕೆ ಇಂದು ಭೇಟಿ ನೀಡಿ ಘಟಕದ ಕಾರ್ಯವೈಖರಿಯನ್ನು ಅವರು ಪರಿಶೀಲನೆ ನಡೆಸಿದರು. ೨೦೨೪ರ ಮಾರ್ಚ್‌ನಿಂದ ಈ ಘಟಕ ಕಾರ್ಯನಿರ್ವಹಿಸುತ್ತಿದ್ದು, ಪ್ರತಿನಿತ್ಯ ೮ ವಾರ್ಡ್‌ಗಳಿಂದ ಸುಮಾರು ೧೬೦ ರಿಂದ ೧೭೦ ಮೆಟ್ರಿಕ್ ಟನ್ ತ್ಯಾಜ್ಯ ಬರಲಿದೆ. ಘಟಕದಲ್ಲಿ ೩೫ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ಈ ತ್ಯಾಜ್ಯವನ್ನು ತ್ಯಾಜ್ಯ ಸಂಸ್ಕರಣಾ ಘಟಕಗಳಿಗೆ ಕ್ಯಾಪ್ಸೂಲ್‌ಗಳ ಮೂಲಕ ರವಾನಿಸಲಾಗುತ್ತದೆ ಎಂದು ಕೆ.ಎನ್. ರಮೇಶ್ ತಿಳಿಸಿದರು. ಘಟಕದಲ್ಲಿ ೭ ಕ್ಯಾಪ್ಸೂಲ್ ವಾಹನಗಳು ಕಾರ್ಯನಿರ್ವಹಿಸುತ್ತಿದ್ದು, ಒಂದು ಕ್ಯಾಪ್ಸೂಲ್ ವಾಹನಕ್ಕೆ ಎರಡು ಕಂಟೈನರ್‌ಗಳು ಇರಲಿವೆ. ವಾರ್ಡ್‌ಗಳಿಂದ ಆಟೋ ಟಿಪ್ಪರ್‌ಗಳ ಮೂಲಕ ಬರುವ ತ್ಯಾಜ್ಯವನ್ನು ಕಂಪ್ರೆಸ್ ಮಾಡಿ ತುಂಬುವುದರಿಂದ ೧ ಕ್ಯಾಪ್ಸೂಲ್‌ನಲ್ಲಿ ೧೬ ರಿಂದ ೧೮ ಟನ್ ತ್ಯಾಜ್ಯವನ್ನು ತುಂಬಹುದಾಗಿದ್ದು, ಇದರಿಂದ ಕಡಿಮೆ ವಾಹನಗಳನ್ನು ಬಳಸಬಹುದಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><><>

ಇಂದು ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ. ಇದರ ಅಂಗವಾಗಿ ರಾಜ್ಯದ ವಿವಿಧೆಡೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮವನ್ನು ಜಿಲ್ಲಾಡಳಿತ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಿಲ್ಲಾ ಸಹಾಯಕ ನಿರ್ದೇಶಕ ಡಿ.ಎಂ.ರವಿಕುಮಾರ್ ಮಾತನಾಡಿ, ನಾರಾಯಣಗುರುಗಳು ಸಮಾಜದ ಅಸಮಾನತೆಗಳ ವಿರುದ್ಧ ಧ್ವನಿ ಎತ್ತಿದ್ದರು. ಅವರೊಬ್ಬ ಮಹಾನ್ ದಾರ್ಶನಿಕರಾಗಿ, ಉತ್ತಮ ಸಮಾಜದ ನಿರ್ಮಾಣಕ್ಕಾಗಿ ಶ್ರಮಿಸಿದರು. ಪ್ರತಿಯೊಬ್ಬರಿಗೂ ಶಿಕ್ಷಣ ದೊರೆಯಬೇಕು. ಒಂದೇ ಜಾತಿ, ಒಂದೆ ಮತ, ಒಂದೇ ದೇವರು ಎಂಬ ಸಿದ್ಧಾಂತದ ಮೂಲಕ ತಳ ಸಮುದಾಯದ ಹೆಣ್ಣುಗಳ

ಶೋಷಣೆ, ಅಸಮಾನತೆಗಳ ವಿರುದ್ಧ ಧ್ವನಿ ಎತ್ತಿದ್ದರು ಎಂದು ಸ್ಮರಿಸಿದರು. ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಮಾತನಾಡಿ, ಆಧ್ಯಾತ್ಮದ ಮೂಲಕ ಸಮಾಜ ಸುಧಾರಣೆಗೆ ಶ್ರಮಿಸಿದ ನಾರಾಯಣ ಗುರುಗಳ ತತ್ವಾದರ್ಶಗಳನ್ನು ನಾವು ಪಾಲಿಸಬೇಕಿದೆ ಎಂದು ಹೇಳಿದರು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

<><><><>

ಕೇಂದ್ರ ಸರ್ಕಾರ ಜಿಎಸ್‌ಟಿ ಸ್ಲ್ಯಾಬ್‌ಗಳನ್ನು ಇಳಿಸಿ ಬಡವರು, ಹಿಂದುಳಿದವರು, ಮಧ್ಯಮ ವರ್ಗ, ರೈತರು, ಉದ್ಯಮಿಗಳು ಸೇರಿದಂತೆ ಎಲ್ಲರಿಗೂ ಅನುಕೂಲ ಕಲ್ಪಿಸಿದೆ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯ ಭಾರತದ ನಂತರ ಇದೊಂದು ಕ್ರಾಂತಿಕಾರಕ ಬದಲಾವಣೆಯಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ಜನತೆಗೆ ನೀಡಿದ ವಾಗ್ದಾನದಂತೆ ನಡೆದುಕೊಂಡಿದ್ದಾರೆ ಎಂದು ಹೇಳಿದರು. ಇದೇ ಮಾದರಿಯಲ್ಲಿ ರಾಜ್ಯ ಸರ್ಕಾರ ಕೂಡ ರಾಜ್ಯದ ತೆರಿಗೆಯನ್ನು ಇಳಿಕೆ ಮಾಡುವ ಮೂಲಕ ಬಡ ಮತ್ತು ಮಧ್ಯಮ ವರ್ಗದ ಜನರ ನೆರವಿಗೆ ಬರಬೇಕೆಂದು ಎಂ.ಪಿ.ರೇಣುಕಾಚಾರ್ಯ ಆಗ್ರಹಿಸಿದರು.

<><><><>

ಜಿ.ಎಸ್.ಟಿ. ಎರಡನೇ ಹಂತದ ಸುಧಾರಣಾ ಕ್ರಮದ ಅನುಷ್ಠಾನಕ್ಕೆ ಕೇಂದ್ರ ಸರ್ಕಾರ ಮುಂದಾಗಿದ್ದು, ದೇಶದ ಹಿತದೃಷ್ಟಿಯಿಂದ ಕ್ರಾಂತಿಕಾರಕ ನಿರ್ಧಾರವಾಗಿದೆ ಎಂದು ಬಿಜೆಪಿ ರಾಜ್ಯ ವಕ್ತಾರ ಹರಿಪ್ರಕಾಶ್ ಕೋಣೆಮನೆ ಅಭಿಪ್ರಾಯಪಟ್ಟಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜಿ.ಎಸ್.ಟಿ ಸ್ಲ್ಯಾಬ್ ಅನ್ನು ಎರಡು ಹಂತಕ್ಕೆ ಇಳಿಸಲಾಗಿದೆ. ಜನಸಾಮಾನ್ಯರಿಗೆ ಇದರ ನೇರ ಉಪಯೋಗ ದೊರೆಯಲಿದೆ. ಆಹಾರೋತ್ಪನ್ನ, ವಿಮೆ ಹಾಗೂ ಅಗತ್ಯ ಔಷಧಗಳನ್ನು ಸಂಪೂರ್ಣ ತೆರಿಗೆ ಮುಕ್ತ ಮಾಡಿರುವುದು ಎಲ್ಲರಿಗೂ ಉಪಯುಕ್ತವಾಗಿದೆ. ಇನ್ನೂ ಒಂದು ಹಂತದಲ್ಲಿ ಜಿ.ಎಸ್.ಟಿ ಸುಧಾರಣೆಯ ಬಗ್ಗೆಯೂ ಕೇಂದ್ರ ಸರ್ಕಾರ ಸುಳಿವು ನೀಡಿದೆ ಎಂದು ಹೇಳಿದರು. ದೇಶದ ಆರ್ಥಿಕ ಸ್ಥಿತಿ ಆಶಾದಾಯಕವಾಗಿದೆ. ದೇಶ ಪ್ರಗತಿಯ ದಾಪುಗಾಲು ಹಾಕುತ್ತಿರುವ ಸಂದೇಶವನ್ನು ಈ ಮೂಲಕ ಪ್ರಪಂಚಕ್ಕೆ ಕೇಂದ್ರ ಸರ್ಕಾರ ನೀಡಿದೆ ಎಂದರು. ಈ ತೆರಿಗೆ ಸುಧಾರಣೆಯಿಂದ ತೆರಿಗೆ ಸಂಗ್ರಹದ ಮೊತ್ತ ಮೊದಲಿಗಿಂತ ಸುಮಾರು ಒಂದುವರೆ ಪಟ್ಟು ಹೆಚ್ಚಳವಾಗಲಿದೆ. ಜನಸಾಮಾನ್ಯರಿಗೆ ಅಗತ್ಯ ವಸ್ತುಗಳ ಮೇಲೆ

ರಾಜ್ಯ ಹೇರುವ ತೆರಿಗೆಯನ್ನು ರಾಜ್ಯ ಸರ್ಕಾರ ಕಡಿಮೆ ಮಾಡಿದರೆ ಇನ್ನಷ್ಟು ಅನುಕೂಲವಾಗಲಿದೆ ಎಂದು ಬಿಜೆಪಿ ರಾಜ್ಯ ವಕ್ತಾರ ಹರಿಪ್ರಕಾಶ್ ಕೋಣೆಮನೆ ಅಭಿಪ್ರಾಯಪಟ್ಟಿದ್ದಾರೆ.

<><><><>

ಚಂದ್ರ ಗ್ರಹಣ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯ ಹೊರನಾಡು ಶ್ರೀ ಅನ್ನಪೂರ್ಣೇಶ್ವರಿ ದೇವಾಲಯಗಳಲ್ಲಿ ಪೂಜೆ, ದರ್ಶನ, ಅನ್ನಸಂತರ್ಪಣೆ ಕಾರ್ಯಕ್ರಮಗಳನ್ನು ಇಂದು ಮಧ್ಯಾಹ್ನದ ನಂತರ ರದ್ದುಪಡಿಸಲಾಗಿದೆ. ಇನ್ನು ಶೃಂಗೇರಿ ಶಾರದಾ ಪೀಠದಲ್ಲಿ ಎಂದಿನಂತೆ ದೇವರ ದರ್ಶನ, ಪೂಜಾ ಕಾರ್ಯಕ್ರಮಗಳು ಇರಲಿದ್ದು, ಮಠದ ಯಜ್ಞ ಶಾಲೆಯಲ್ಲಿ ಇಂದು ರಾತ್ರಿ ೧೦ ರಿಂದ ೧೨ ಗಂಟೆಯವರಗೆ  ಚಂದ್ರ ಗ್ರಹಣ ಶಾಂತಿ ಹೋಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಾರದ ಪೀಠದ ಆಡಳಿತ ಮಂಡಳಿ ತಿಳಿಸಿದೆ. ಇಂದು ರಾತ್ರಿ ಸಂಭವಿಸಲಿರುವ ಚಂದ್ರ ಗ್ರಹಣದ ಅಂಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಪ್ರಸಿದ್ಧ ಶೀಘಾಟಿ ಕ್ಷೇತ್ರದ ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಾಲಯವನ್ನು ಸಂಜೆ ೪:೩೦ಕ್ಕೆ ಮುಚ್ಚಲಾಗುತ್ತದೆ. ನಾಳೆ ಬೆಳಗ್ಗೆ ಶುದ್ಧೀಕರಣದ ನಂತರ ತೆರೆಯಲಾಗುವುದು. ದೊಡ್ಡಬಳ್ಳಾಪುರ ತಾಲೂಕಿನ ಮಧುರೆ ಹೋಬಳಿ ಕನಸವಾಡಿ ಕ್ಷೇತ್ರದ ಶ್ರೀ ಶನಿಮಹಾತ್ಮ ಸ್ವಾಮಿ ದೇವಾಲಯವನ್ನು ಸಂಜೆ ೪ ಗಂಟೆಗೆ ಮುಚ್ಚಲಾಗುವುದು. ನಾಳೆ ಬೆಳಗಿನ ಜಾವ ಸ್ವಾಮಿಗೆ ತೈಲಾಭಿಷೇಕ, ಪಂಚಾಮೃತ ಅಭಿಷೇಕ ಸಲ್ಲಿಸಿ, ಭಕ್ತಾದಿಗಳ ದರ್ಶನಕ್ಕೆ ಅನುವು ಮಾಡಿಕೊಡಲಾಗುವುದು ಎಂದು ದೇವಾಲಯ ಆಡಳಿತ ಮಂಡಳಿ ತಿಳಿಸಿದೆ.

<><><><>

ಕೋಲಾರ ನಗರದ ಪ್ರಮುಖ ಉದ್ಯಾನವನಗಳ ಸ್ಥಿತಿಗತಿ ಪರಿಶೀಲನೆಗಾಗಿ ಜಿಲ್ಲಾಧಿಕಾರಿ ಡಾ. ಎಂ.ಆರ್.ರವಿ ಇಂದು ಬೆಳಗ್ಗೆ ಸೈಕಲ್ ರೌಂಡ್ಸ್ ನಡೆಸಿದರು. ಈ ವೇಳೆ ನಗರಸಭೆ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಜೊತೆಗೂಡಿದರು. ಜಿಲ್ಲಾಧಿಕಾರಿಗಳು ಸರ್ವಜ್ಞ ಉದ್ಯಾನವನ, ಅಂಬೇಡ್ಕರ್ ಉದ್ಯಾನವನ, ಕುವೆಂಪು ಉದ್ಯಾನವನ ಸೇರಿದಂತೆ ನಗರದ ವಿವಿಧ ಉದ್ಯಾನವನಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಈ ಭೇಟಿಯು, ಇಂದಿನಿಂದ ಆರಂಭಗೊಂಡ 'ಸ್ವಚ್ಛತಾ ಹಿ ಸೇವಾ' ಆಂದೋಲನದ ಭಾಗವಾಗಿತ್ತು. ಅಕ್ಟೋಬರ್ ೨ರವರೆಗೆ ನಡೆಯಲಿರುವ ಈ ಅಭಿಯಾನದಲ್ಲಿ, ಪ್ರತಿ ಭಾನುವಾರ ನಗರದ ಎಲ್ಲಾ ಉದ್ಯಾನವನಗಳನ್ನು ಸಾರ್ವಜನಿಕರ ಸಹಭಾಗಿತ್ವದಲ್ಲಿ ಸ್ವಚ್ಛಗೊಳಿಸಲು ನಿರ್ಧರಿಸಲಾಗಿದೆ. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ, ಉದ್ಯಾನವನಗಳಲ್ಲಿ ವಾಕಿಂಗ್ ಟ್ರ್ಯಾಕ್ ಸಮತಟ್ಟುಗೊಳಿಸಿ, ನಡೆದಾಡುವವರಿಗೆ ಅನುಕೂಲ ಕಲ್ಪಿಸಬೇಕು. ಸುಮಾರು

೮೫ ವರ್ಷಗಳಷ್ಟು ಹಳೆಯದಾದ ಸರ್ವಜ್ಞ ಉದ್ಯಾನವನದಲ್ಲಿರುವ ಬ್ಯಾಂಡ್ ಸ್ಟಾಂಡ್ ಮತ್ತು ರೇಡಿಯೋ ಕಿಯೋಸ್ಕ್ ಅನ್ನು ದುರಸ್ತಿಪಡಿಸಿ, ಬಣ್ಣ ಹಚ್ಚಿಸುವಂತೆ ಸೂಚಿಸಿದರು. ವಾರಾಂತ್ಯಗಳಲ್ಲಿ ಇಂತಹ ಸ್ಥಳಗಳಲ್ಲಿ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಲು ಚಿಂತಿಸುವಂತೆಯೂ ಸಲಹೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>